**ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂರವರ ನ್ಯಾಯಾಲಯ, ಪೊನ್ನಂಪೇಟೆ.**

**ಸಿ.ಸಿ.ನಂ.445/2026**

**ಪಿರ್ಯಾದಿ** : ರಾಜ್ಯ ಸರ್ಕಾರ,
ಪೊನ್ನಂಪೇಟೆ ಪೋಲೀಸ್ ಠಾಣೆ.

**ವಿರುದ್ದ**

**ಆರೋಪಿ** : ಶ್ರೀ ಪಣಿಎರವರ ಸುಭ್ರಮಣಿ,
ತಂದೆಃ ಪಣಿಎರವರ ಬೀರ,
ಪ್ರಾಯ 24 ವರ್ಷ
ವಾಸಃ ಅಲ್ಲುಮಾಡ ಸುನೀಲ್ ಲೈನ್ ಹೌಸ್,
ಕಾನೂರು ಗ್ರಾಮ, ಕೊಡಗು.

**ಆರೋಪಣೆ**

ಶ್ರೀ ಶ್ರೀನಾಥ್ ಎ,. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆಃ

ದಿನಾಂಕ 01.11.2025 ರಂದು ಪೊನ್ನಂಪೇಟೆ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ಪೊನ್ನಂಪೇಟೆ - ಕಾನೂರು ರಸ್ತೆ ಮಧ್ಯ ಇರುವ ಬೆಕ್ಕೆಸೊಡ್ಲೂರು ಗ್ರಾಮದ ಬಳಿ, ಆರೋಪಿಯಾದ ನೀವು ತಾವು ಕೆಲಸ ಮಾಡುವ ಮಾಲೀಕರ ಮಗಳ ಮದುವೆ ಕಾರ್ಯಕ್ರಮಕ್ಕೆ ಗೋಣಿಕೊಪ್ಪದ ಫಾಮ್ ಹ್ವಾಲಿಗೆ ಹೋಗಿ ಮದುವೆ ಮುಗಿಸಿ ಕೆಎ.12.ಎಕ್ಸ್.7270 ರ ಸ್ಕೂಟಿಯಲ್ಲಿ ಹಿಂಬದಿ ಸವಾರರನ್ನಾಗಿ ಸಾಕ್ಷಿ 1 ದರ್ಶನ್ ಹಾಗೂ ಸಾಕ್ಷಿ 2 ರಾಜು ರವರನ್ನು ಕೂರಿಸಿಕೊಂಡು ಬರುತ್ತಿರುವಾಗ, ಬೆಕ್ಕೆಸೊಡ್ಲೂರು ಗ್ರಾಮದ ತಾಣಚ್ಚೀರ ಉಮೇಶ್ ರವರ ವಾಸದ ಮನೆಯ ಮುಂಭಾಗದ ಸಾರ್ವಜನಿಕ ರಸ್ತೆಯಲ್ಲಿ ಸ್ಕೂಟಿಯನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಿಯಂತ್ರಣ ತಪ್ಪಿ ಎಡಬದಿಯಲ್ಲಿದ್ದ ಕಬ್ಬಿಣದ ಫಲಕ ಮತ್ತು ಅದರ ಕಾಂಕ್ರೀಟ್ ತಳಪಾಯದ ಕಟ್ಟೆಗೆ ಗುದ್ದಿ ಅಪಘಾತ ಪಡಿಸಿರುತ್ತೀರಿ ಎಂಬುದಾಗಿರುತ್ತದೆ. ಆ ಕಾರಣ ಬಿ.ಎನ್.ಎಸ್ ಕಲಂ 281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ, ಮೇಲೆ ಹೇಳಲಾದ ದಿನ, ಸ್ಥಳ, ಸಮಯ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀವು ಅಪಘಾತ ಪಡಿಸಿದ ಪರಿಣಾಮ ಹಿಂಬದಿಯಲ್ಲಿ ಕುಳಿತ್ತಿದ್ದ ಸಾಕ್ಷಿ 1 ರವರಿಗೆ ಸಾಮಾನ್ಯ ಮತ್ತು ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ. ಆ ಕಾರಣ ಬಿ.ಎನ್.ಎಸ್ ಕಲಂ 125(ಎ) ಮತ್ತು 125(ಬಿ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೂರನೆಯದಾಗಿ, ಮೇಲೆ ಹೇಳಲಾದ ದಿನ, ಸ್ಥಳ, ಸಮಯ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀವು ಸದರಿ ಸ್ಕೂಟಿಯನ್ನು ಚಲಾಯಿಸಲು ನಿಗದಿಪಡಿಸಿದ ವಾಹನ ಚಾಲನಾ ಪರವಾನಗಿ ಪತ್ರ ಇಲ್ಲದಿದ್ದರು ಆ ದಿನ ಸ್ಕೂಟಿಯನ್ನು ಚಾಲನೆ ಮಾಡಿರುತ್ತೀರಿ ಎಂಬುದಾಗಿರುತ್ತದೆ. ಆ

ಕಾರಣ ಆರೋಪಿಯಾದ ನಿಮ್ಮ ವಿರುದ್ಧ ಮೋಟಾರು ವಾಹನ ಕಾಯಿದೆ ಕಲಂ 3(1) ಸಹವಾಚಕ 181 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಮೇಲೆ ಹೇಳಲಾದ ದಿನ, ಸ್ಥಳ, ಸಮಯ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀವು ದ್ವಿಚಕ್ರ ವಾಹನದಲ್ಲಿ ಒಬ್ಬರನ್ನು ಮಾತ್ರ ಹಿಂಬದಿ ಸವಾರರನ್ನಾಗಿ ಕೂರಿಸಿಕೊಂಡು ಹೋಗಬಹುದು ಎಂದು ಗೊತ್ತಿದ್ದರು ಸಹ ಆ ದಿನ ಸ್ಕೂಟಿಯಲ್ಲಿ ಇಬ್ಬರನ್ನು ಹಿಂಬದಿ ಸವಾರರನ್ನಾಗಿ ಕೂರಿಸಿಕೊಂಡು ನಿಯಮವನ್ನು ಉಲ್ಲಂಘನೆ ಮಾಡಿರುತ್ತೀರಿ ಎಂಬುದಾಗಿರುತ್ತದೆ. ಆ ಕಾರಣ ಆರೋಪಿಯಾದ ನೀವು ಮೋಟಾರು ವಾಹನ ಕಾಯಿದೆ ಕಲಂ 128(1) ಸಹವಾಚಕ 177 ಮೋಟಾರು ವಾಹನ ಕಾಯ್ದೆ ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಪ್ರಶ್ನೆ 1: ನಿಮಗೆ ಓದಿ ಹೇಳಲಾದ ಆರೋಪವನ್ನು ಅರ್ಥಮಾಡಿಕೊಂಡಿದ್ದೀರಾ?

ಉತ್ತರ : ಅರ್ಥವಾಯಿತು.

ಪ್ರಶ್ನೆ 2: ನಿಮ್ಮ ಮೇಲೆ ಹೊರಿಸಲಾದ ಆರೋಪವನ್ನು ಒಪ್ಪಿಕೊಳ್ಳುತ್ತೀರಾ ಅಥವಾ ವಿಚಾರಣೆಯಾಗಲೇಬೇಕೆ?

ಉತ್ತರ:ತಪ್ಪಾಯಿತು, ದಂಡ ಕಟ್ಟುತ್ತೇನೆ.

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಅವರ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ಸ್ಥಳಃ ಪೊನ್ನಂಪೇಟೆ,
ದಿಃ-01-06-2026

Sd/-
**ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ**
**ಪೊನ್ನಂಪೇಟೆ.**